# ಪ್ರವಾದಿ ಜೆಫನ್ಯನ ಗ್ರಂಥ

### ಮುನ್ನುಡಿ

ಪ್ರವಾದಿ ಜೆಫನ್ಯ ಬೋಧನೆ ಮಾಡಿದ್ದು ಕ್ರಿ.ಪೂ. ಏಳನೇ ಶತಮಾನದ ಕೊನೆಯ ಭಾಗದಲ್ಲಿ. ಇಸ್ರಯೇಲರ ಅರಸನಾದ ಯೋಷೀಯ ಎಂಬವನು ಕ್ರಿ.ಪೂ. 620ರಲ್ಲಿ ಕೆಲವು ಧಾರ್ಮಿಕ ಸುಧಾರಣೆಗಳನ್ನು ಮಾಡಿದನು. ಬಹುಶಃ ಇದಕ್ಕೆ ಒಂದು ದಶಕದ ಹಿಂದೆಯೇ ಜೆಫನ್ಯ ತನ್ನ ಬೋಧನಾಸೇವೆಯನ್ನು ಮಾಡಿದ್ದಿರಬೇಕು. ಸರ್ವ ವಿನಾಶದ ದಿನ ಸನ್ನಿಹಿತವಾಗಿದೆ; ಅನ್ಯದೇವರುಗಳ ಆರಾಧನೆಯ ನಿಮಿತ್ತ ಜುದೇಯನಾಡಿಗೆ ತಕ್ಕ ದಂಡನೆ ಕಾದಿದೆ. ಇತರ ರಾಷ್ಟ್ರಗಳು ಈ ದಂಡನೆಯಿಂದ ಪಾರಾಗುವಂತಿಲ್ಲ. ಜೆರುಸಲೇಮ್ ನಗರ ಪೂರ್ಣವಾಗಿ ಅಳಿದುಹೋದರೂ ಅದರ ಪುನರುದ್ಧಾರದ ದಿನ ಬಂದೇ ಬರುವುದು. ದೀನದಲಿತರು, ನೀತಿವಂತರು ಮಾತ್ರ ಬದುಕುವರು – ಇವೇ ಮುಂತಾದ ವಿಷಯಗಳನ್ನು ಕುರಿತು ಇದರಲ್ಲಿ ಉಲ್ಲೇಖಿಸಲಾಗಿದೆ. ಈ ವಿಷಯಗಳು ಇತರ ಪ್ರವಾದನಾ ಗ್ರಂಥಗಳಲ್ಲೂ ಅಡಗಿವೆ.

### ಪರಿವಿಡಿ


| | | | | |
|---|---|---|---|---|
| ದೇವರ ದಂಡನೆಯ ದಿನ | – | 1.1 | – | 2.3 |
| ನೆರೆರಾಷ್ಟ್ರಗಳ ಅಳಿವು | – | 2.4 | – | 2.15 |
| ಜೆರುಸಲೇಮಿನ ವಿನಾಶ, ಪುನರ್‌ಸ್ಥಾಪನೆ | – | 3.1 | – | 3.20 |


**1** ಅಮೋನನ ಮಗನು ಹಾಗೂ ಜುದೇಯದ ಅರಸನು ಆದ ಯೋಷೀಯನ ಕಾಲದಲ್ಲಿ ಸರ್ವೇಶ್ವರ
ಜೆಫನ್ಯನಿಗೆ ಕೊಟ್ಟ ಸಂದೇಶವಿದು: (ಜೆಫನ್ಯನು ಕೂಷಿಯ ಮಗನು; ಕೂಷಿಯನು ಗೆದಲ್ಯನಿಗೆ, ಗೆದಲ್ಯನು
ಅಮರ್ಯನಿಗೆ, ಅಮರ್ಯನು ಹಿಜ್ಕೀಯನಿಗೆ ಹುಟ್ಟಿದವರು).

### ಜೆರುಸಲೇಮಿಗೆ ನ್ಯಾಯತೀರ್ಪು

2 ಸರ್ವೇಶ್ವರ ಇಂತೆಂದರು – "ನಾನು ಭೂಮಂಡಲದ ಮೇಲೆ ಏನೂ ಇಲ್ಲದಂತೆ ಸಮಸ್ತವನ್ನು
ಅಳಿಸಿಬಿಡುವೆನು. 3ಮನುಷ್ಯರು, ಮೃಗಗಳು, ಆಕಾಶದ ಪಕ್ಷಿಗಳು, ಸಮುದ್ರದ ಮೀನುಗಳು – ಇವೆಲ್ಲವನ್ನು
ನಾಶಪಡಿಸುವೆನು. ದುರ್ಜನರು ಬಿದ್ದು ಸಾಯುವಂತೆ ಮಾಡುವೆನು; ನರಸಂತಾನವನ್ನು ಧರೆಯ ಮೇಲಿಂದ
ಕಿತ್ತು ಹಾಕುವೆನು." ಇದು ಸರ್ವೇಶ್ವರಸ್ವಾಮಿಯ ನುಡಿ.
4 "ಜುದೇಯ ನಾಡನ್ನೂ ಜೆರುಸಲೇಮಿನ ನಿವಾಸಿಗಳೆಲ್ಲರನ್ನೂ ಕೈಯೆತ್ತಿ ಸದೆಬಡಿಯುವೆನು;
ಬಾಳನ ಪೂಜೆಪುರಸ್ಕಾರಗಳ ಗುರುತೂ ಅಲ್ಲಿ ಇಲ್ಲದಂತೆ ಮಾಡುವೆನು. ಅವನ ಪೂಜಾರಿಗಳನ್ನು
ನಿರ್ನಾಮಗೊಳಿಸುವೆನು; 5ಮಾಳಿಗೆಗಳ ಮೇಲೆ ನಿಂತು ಆಕಾಶದ ಸೂರ್ಯ, ಚಂದ್ರ, ನಕ್ಷತ್ರಗಳನ್ನು
ಆರಾಧಿಸುವವರನ್ನು ನಾಶಗೊಳಿಸುವೆನು: ಅಂತೆಯೇ ಸರ್ವೇಶ್ವರನ ಆರಾಧಕರೆಂದು ಪ್ರಮಾಣಮಾಡಿ,
ಮಲ್ಕಾಮನ ಮೇಲೂ ಪ್ರಮಾಣ ಮಾಡುವವರನ್ನು ವಿನಾಶಗೊಳಿಸುವೆನು. 6ನನಗೆ ಬೆನ್ನು ತೋರಿಸಿ, ನನ್ನ
ದರ್ಶನವನ್ನು ಬಯಸದೆ, ನನ್ನ ಮಾರ್ಗಬಿಟ್ಟವರನ್ನು ಧ್ವಂಸಮಾಡುವೆನು."
7 "ಸ್ವಾಮಿ ಸರ್ವೇಶ್ವರ ನ್ಯಾಯತೀರ್ಪು ನೀಡುವ ದಿನ ಸಮೀಪಿಸಿದೆ; ಆದುದರಿಂದ ಅವರ
ಸನ್ನಿಧಿಯಲ್ಲಿ ಮೌನ ತಾಳಿರಿ. ಸರ್ವೇಶ್ವರ, ಯಜ್ಞದ ಔತಣವನ್ನು ಸಿದ್ಧಗೊಳಿಸಿದ್ದಾರೆ. ಅತಿಥಿಗಳನ್ನು

ಪವಿತ್ರೀಕರಿಸಿದ್ದಾರೆ. 8ಸ್ವಾಮಿಯ ಆ ಯಜ್ಞದ ದಿನದಂದು ನಾನು ದೇಶಾಧಿಪತಿಗಳನ್ನು, ರಾಜವಂಶದವರನ್ನು,
ಹಾಗೂ ಅನ್ಯಮತೀಯ ವಸ್ತ್ರಧಾರಿಗಳನ್ನು ದಂಡಿಸುವೆನು. 9ಹೊಸ್ತಿಲನ್ನು ದಾಟಿ ಮೋಸ, ವಂಚನೆ,
ಹಿಂಸಾಚಾರಗಳಿಂದ ದೋಚಿದವುಗಳನ್ನು ತಂದು ತಮ್ಮ ದೇವರ ಮಂದಿರವನ್ನು ತುಂಬಿಸುವ ಎಲ್ಲರನ್ನೂ
ಆ ದಿನದಂದು ನಾನು ದಂಡಿಸುವೆನು.

10 “ಆ ದಿನದಲ್ಲಿ ಜೆರುಸಲೇಮಿನಲ್ಲಿರುವ ಮೀನು ಬಾಗಿಲಿನ ಬಳಿ ಕೂಗಾಟವನ್ನು, ಪಟ್ಟಣದ
ಹೊಸ ಬಡಾವಣೆಯಲ್ಲಿ ಗೋಳಾಟವನ್ನು, ಹಾಗೂ ಬೆಟ್ಟಗುಡ್ಡಗಳಲ್ಲಿ ಭೀಕರ ಗದ್ದಲವನ್ನು ಕೇಳುವಿರಿ. ಇದು
ಸರ್ವೇಶ್ವರಸ್ವಾಮಿಯ ನುಡಿ. 11ಆಗ ಪಟ್ಟಣದ ಸಂತೆಬೀದಿಗಳಲ್ಲಿ ವಾಸಮಾಡುವವರು ಅತ್ತು ಪ್ರಲಾಪಿಸಲಿ;
ವ್ಯಾಪಾರಸ್ಥರೆಲ್ಲರೂ ಸತ್ತು ಹೋಗಿರುವರು; ಅಕ್ಕಸಾಲಿಗರೆಲ್ಲರೂ ಕಣ್ಮರೆಯಾಗಿರುವರು.

12 “ಆಗ ದೀಪವನ್ನು ಹಿಡಿದುಕೊಂಡು ಜೆರುಸಲೇಮನ್ನೆಲ್ಲಾ ಹುಡುಕಿಬಿಡುವೆನು. ಸರ್ವೇಶ್ವರ
ಮೇಲನ್ನಾಗಲಿ, ಕೇಡನ್ನಾಗಲಿ ಏನನ್ನೂ ಮಾಡುವುದಿಲ್ಲ' ಎಂದುಕೊಳ್ಳುವ ಮೆದ್ಯದ ಮಡ್ಡಿಯಂಥ ಜಡ
ಮನಸ್ಕರನ್ನು ದಂಡಿಸುವೆನು. 13ಅವರ ಆಸ್ತಿಪಾಸ್ತಿಯೆಲ್ಲಾ ಸೂರೆಯಾಗುವುದು, ಅವರ ಮನೆಮಠಗಳು
ಹಾಳಾಗುವುವು; ಮನೆಗಳನ್ನು ಕಟ್ಟಿಕೊಂಡರೂ ಅವುಗಳಲ್ಲಿ ಜನರು ವಾಸಮಾಡರು; ದ್ರಾಕ್ಷಾ ತೋಟಗಳನ್ನು
ಬೆಳೆಸಿಕೊಂಡರೂ ಅವುಗಳಿಂದ ದ್ರಾಕ್ಷಾರಸವನ್ನು ಕುಡಿಯರು.”

## ನ್ಯಾಯತೀರ್ಪಿನ ಕರಾಳ ದಿನ

14 ಸರ್ವೇಶ್ವರಸ್ವಾಮಿಯ ಮಹಾದಿನ ಹತ್ತಿರವಾಯಿತು; ಸಮೀಪಿಸಿತು. ಅದು ಬಹು ತ್ವರೆಯಾಗಿ
ಬರುತ್ತಿದೆ; ಅದು ಕಠೋರವಾದ ದಿನ, ಆ ದಿನದ ಸುದ್ದಿ ಕಹಿಯಾದುದು, ಎಂಥಾ ಶೂರರನ್ನೂ ಕೂಡ
ಘೋರವಾಗಿ ಗೋಳಾಡಿಸುವಂಥದ್ದು. 15ಅದು ರೌದ್ರದ ದಿನ, ಕಷ್ಟ – ಸಂಕಟದ ದಿನ, ನಾಶವಿನಾಶದ
ದಿನ, ಕತ್ತಲು ಕಾರ್ಗತ್ತಲ ದಿನ, ಕಾರ್ಮುಗಿಲು ಕವಿದ ಕರಾಳ ದಿನ; 16ಕೋಟೆ ಕೊತ್ತಲಗಳನ್ನು,
ಘನಗೋಪುರಗಳನ್ನು ಆಕ್ರಮಿಸಲು ಯುದ್ಧಕಹಳೆಯು ಮೊಳಗುವ ದಿನ, ಯುದ್ಧ ಘೋಷಣೆಗಳನ್ನು
ಆರ್ಭಟಿಸುವ ದಿನ.

17 ಸರ್ವೇಶ್ವರ ಇಂತೆನ್ನುತ್ತಾರೆ, “ಮಾನವರ ಮೇಲೆ ಕಷ್ಟ–ಸಂಕಟಗಳನ್ನು ಬರಮಾಡುವೆನು; ಅವರು
ಕುರುಡರಂತೆ ತಡಕಾಡುವರು. ಏಕೆಂದರೆ ಅವರು ನನಗೆ ವಿರೋಧವಾಗಿ ಪಾಪಮಾಡಿದ್ದಾರೆ; ಅವರ
ರಕ್ತವನ್ನು ನೀರಿನಂತೆ ಚೆಲ್ಲಲಾಗುವುದು; ಅವರ ಹೆಣಗಳನ್ನು ಕಸದಂತೆ ಕೊಳೆಯಲು ಬಿಡಲಾಗುವುದು.”

18 ಸ್ವಾಮಿಯ ಆ ರೌದ್ರದಿನದಂದು, ಅವರ ಬೆಳ್ಳಿಯಾಗಲೀ ಬಂಗಾರವಾಗಲೀ ಅವರನ್ನು
ರಕ್ಷಿಸಲಾರದು. ಸ್ವಾಮಿಯ ರೋಷಾಗ್ನಿ ಧರೆಯನ್ನೆಲ್ಲಾ ದಹಿಸಿಬಿಡುವುದು; ಹೌದು, ಭೂನಿವಾಸಿಗಳೆಲ್ಲರನ್ನೂ
ತಟ್ಟನೆ ಕೊನೆಗಾಣಿಸುವುದು.

## ಪಶ್ಚಾತ್ತಾಪಕ್ಕೆ ಕರೆ

**2** ನಾಚಿಕೆ ಇಲ್ಲದ ಜನಾಂಗದವರೇ, ತೀರ್ಪು ಫಲಿಸುವುದರೊಳಗೆ, 2ಕಾಲವು ಹೊಟ್ಟಿನಂತೆ
ಹಾರಿಹೋಗುವ ಮೊದಲು, ಸರ್ವೇಶ್ವರ ಸ್ವಾಮಿಯ ಉಗ್ರಕೋಪವು ನಿಮ್ಮ ಮೇಲೆ ಎರಗುವ ಮುಂಚೆ,
ಅವರ ಸಿಟ್ಟಿನ ದಿನ ನಿಮ್ಮನ್ನು ಮುಟ್ಟುವುದಕ್ಕೆ ಮುನ್ನ ಸೇರ ಬನ್ನಿ, ಕೂಡಿ ಬನ್ನಿ. 3ನಾಡಿನ ದೀನ ಜನರೇ,
ಸರ್ವೇಶ್ವರನ ಆಜ್ಞೆಯನ್ನು ಕೈಗೊಂಡು ನಡೆಯುವವರೇ, ನೀವೆಲ್ಲರೂ ಸ್ವಾಮಿಯ ಕಡೆಗೆ ತಿರುಗಿಕೊಳ್ಳಿ,
ಒಳ್ಳೆಯದನ್ನು ಮಾಡಿರಿ, ಸ್ವಾಮಿಯ ಮುಂದೆ ನಿಮ್ಮನ್ನೇ ತಗ್ಗಿಸಿಕೊಳ್ಳಿ; ಸರ್ವೇಶ್ವರಸ್ವಾಮಿಯ ಆ ಸಿಟ್ಟಿನ
ದಿನದಂದು ಬಹುಶಃ ನೀವು ಸುರಕ್ಷಿತರಾಗುವಿರಿ.

## ಇಸ್ರಯೇಲಿನ ಸುತ್ತಮುತ್ತಲಿನ ರಾಷ್ಟ್ರಗಳ ವಿನಾಶ

4 ಗಾಜಾಪಟ್ಟಣ ನಿರ್ಜನವಾಗುವುದು, ಅಷ್ಕೆಲೋನ್ ಹಾಳಾಗುವುದು; ಅಷ್ಡೋದಿನ ನಿವಾಸಿಗಳನ್ನು
ನಡುಮಧ್ಯಾಹ್ನದಲ್ಲೆ ಅಟ್ಟಿಸಿಬಿಡಲಾಗುವುದು; ಎಕ್ರೋನಿನ ಜನರನ್ನು ನಿರ್ಮೂಲ ಮಾಡಲಾಗುವುದು.

5ಕರಾವಳಿಯಲ್ಲಿ ವಾಸಿಸುವ ಕೆರೇತ್ಯ ಜನರೇ, ನಿಮಗೆ ಧಿಕ್ಕಾರ! ಫಿಲಿಷ್ಟಿಯರ ನಾಡಾದ ಕಾನಾನೇ, ನಿನಗೆ ಧಿಕ್ಕಾರ! ಸರ್ವೇಶ್ವರನ ನ್ಯಾಯತೀರ್ಪು ನಿನಗೆ ವಿರುದ್ಧವಾಗಿದೆ; ನಿನ್ನಲ್ಲಿ ಯಾರೂ ಉಳಿಯದಂತೆ ಅಳಿಸಿಬಿಡುವರು.
6ಸಮುದ್ರತೀರದಲ್ಲಿರುವ ಆ ಪ್ರಾಂತ್ಯವು ಹುಲ್ಲುಗಾವಲಾಗುವುದು; ಕುರುಬರ ಗುಡಿಸಲಾಗುವುದು, ಕುರಿಗಳ ದೊಡ್ಡಿಯಾಗುವುದು.
7ಆ ಕರಾವಳಿಯು ಅಳಿದುಳಿದ ಯೆಹೂದ್ಯರ ಪಾಲಾಗುವುದು; ಅವರ ದನಕುರಿಗಳಿಗೆ ಹುಲ್ಲುಗಾವಲಾಗುವುದು; ಅಷ್ಕೆಲೋನಿನ ಮನೆಗಳು ಅವರಿಗೆ ವಿಶ್ರಾಂತಿ ನಿಲಯಗಳಾಗುವುವು. ದೇವರಾದ ಸರ್ವೇಶ್ವರ ಅವರನ್ನು ಪರಿಪಾಲಿಸುವರು ಮತ್ತು ಅವರನ್ನು ಮರಳಿ ಏಳಿಗೆಗೆ ತರುವರು.

8 "ಮೋವಾಬ್ಯರು ಮತ್ತು ಅಮ್ಮೋನ್ಯರು ಅಹಂಕಾರದಿಂದ ನನ್ನ ಜನರ ವಿರುದ್ಧ ಆಡುವ ಚುಚ್ಚುಮಾತುಗಳು ನನ್ನ ಕಿವಿಗೆ ಬಿದ್ದಿವೆ. ನನ್ನ ಜನರ ನಾಡನ್ನು ಸ್ವಾಧೀನಪಡಿಸಿಕೊಳ್ಳುವುದಾಗಿ ಅವರು ಕೊಚ್ಚಿಕೊಳ್ಳುತ್ತಿದ್ದಾರೆ.
9ಇಸ್ರಯೇಲಿನ ಜೀವಂತ ದೇವರೂ ಸೇನಾಧೀಶ್ವರ ಸರ್ವೇಶ್ವರನೂ ಆದ ನಾನು ನಿಶ್ಚಯವಾಗಿ ಹೇಳುತ್ತೇನೆ – ಸೊದೋಮಿನ ಗತಿಯೇ ಮೋವಾಬಿನ ಗತಿ ಆಗುವುದು. ಗೊಮೋರಾದ ದುರ್ಗತಿಯೇ ಅಮ್ಮೋನ್ಯರಿಗೆ ಸಂಭವಿಸುವುದು. ಈ ಪ್ರಾಂತ್ಯಗಳು ಮುಳ್ಳು ಗಿಡಗಳಿಂದಲೂ ಸೌಳುಗುಂಡಿಗಳಿಂದಲೂ ತುಂಬಿಕೊಂಡು ನಿತ್ಯನಾಶನಕ್ಕೆ ಈಡಾಗುವುವು. ನನ್ನ ಜನರಲ್ಲಿ ಉಳಿದವರು ಅವುಗಳನ್ನು ಸೂರೆ ಮಾಡುವರು; ಅಳಿದುಳಿದ ನನ್ನ ಜನರಿಗೆ ಅವು ಸೊತ್ತಾಗುವುವು."

10 ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ಜನರನ್ನು ದೂಷಿಸಿ ದರ್ಪದ ಮಾತುಗಳನ್ನು ಆಡಿದ್ದರಿಂದಲೆ ಈ ಪ್ರಾಂತ್ಯಗಳ ಗರ್ವಿಷ್ಠ ಜನರಿಗೆ ಈ ಶಿಕ್ಷೆಯಾಗುವುದು.
11ಸರ್ವೇಶ್ವರ ಅವರಿಗೆ ಭಯಭೀತಿ ಉಂಟುಮಾಡುವರು; ಅವರ ಭೂಮಿಯಲ್ಲಿನ ದೇವತೆಗಳನ್ನೆಲ್ಲಾ ಕ್ಷಯಿಸಿಬಿಡುವರು; ಅದಾದ ನಂತರ ಪ್ರತಿಯೊಂದು ರಾಷ್ಟ್ರದವರು ತಮ್ಮ ತಮ್ಮ ನಾಡಿನಲ್ಲೇ ಸರ್ವೇಶ್ವರಸ್ವಾಮಿಯನ್ನು ಆರಾಧಿಸುವರು.
12ಸುಡಾನಿನ ಜನರೇ, ನೀವೂ ಸಹ ಕತ್ತಿಗೆ ತುತ್ತಾಗುವಿರಿ.

13 ಅಸ್ಸೀರಿಯವನ್ನು ಸರ್ವೇಶ್ವರ ತಮ್ಮ ಭುಜ ಬಲದಿಂದ ಧ್ವಂಸಮಾಡುವರು; ನಿನೆವೆ ಪಟ್ಟಣವನ್ನು ಹಾಳುಬಿದ್ದ ಅವಶೇಷವಾಗಿ, ನೀರಿಲ್ಲದ ಮರುಭೂಮಿಯಾಗಿ ಮಾಡುವರು.
14ಅದು ದನಗಳ ಹಿಂಡುಗಳಿಗೂ ಕುರಿಗಳ ಮಂದೆಗಳಿಗೂ ಎಲ್ಲಾತರದ ಪ್ರಾಣಿಗಳಿಗೂ ಮಲಗುವ ಹಟ್ಟಿ ಆಗುವುದು; ಅದರ ಹಾಳುಬಿದ್ದ ಮನೆಗಂಬಗಳ ಮೇಲೆ ಗೂಬೆಗಳೂ, ಗುಬ್ಬಚ್ಚಿಗಳೂ ತಂಗುವುವು. ಗೂಬೆಯ ಘೂಂಕಾರವು ಕಿಟಕಿಗಳಿಂದ ಕೇಳಿ ಬರುವುದು; ಕಾಗೆಗಳ ಕೂಗು ಬಾಗಿಲಿನ ಹೊಸ್ತಿಲಲ್ಲೇ ಕೇಳುವುದು; ದೇವದಾರು ಮರದ ತೊಲೆಗಳು ಕಳಚಿಬೀಳುವುವು.
15"ಇರುವ ನಗರ ನಾನೇ, ನನ್ನ ಹೊರತು ಇನ್ನಾರೂ ಇಲ್ಲ" ಎಂದು ಕೊಚ್ಚಿಕೊಂಡು ಯಾವ ಚಿಂತೆಯೂ ಇಲ್ಲದೆ, ನೆಮ್ಮದಿಯಿಂದ ಇದ್ದ ನಿನೆವೆಯ ಗತಿ ನೋಡಿ, ಎಂಥ ಹಾಳುಬಿದ್ದ ಊರಾಗಿದೆ! ಕಾಡುಮೃಗಗಳ ಬೀಡಾಗಿದೆ! ಹಾದು ಹೋಗುವವರೆಲ್ಲ ಸಿಳ್ಳುಹಾಕಿ ಕೈತೋರಿಸಿ ಪರಿಹಾಸ್ಯ ಮಾಡುವಷ್ಟು ಕೀಳಾಗಿದೆ!

## ಜೆರುಸಲೇಮಿನ ಪಾಪ ಮತ್ತು ಪುನರುದ್ಧಾರ

**3** ದಬ್ಬಾಳಿಕೆ ನಡೆಸುವ, ದಂಗೆಯೇಳುವ ದುಷ್ಟ ನಗರಕ್ಕೆ ದಿಕ್ಕಾರ!
2ಅದು ಯಾರ ಬುದ್ಧಿಮಾತಿಗೂ ಕಿವಿಗೊಡಲಿಲ್ಲ. ಶಿಕ್ಷಣಕ್ಕೆ ಒಳಪಡಲಿಲ್ಲ. ಸರ್ವೇಶ್ವರಸ್ವಾಮಿಯಲ್ಲಿ ಭರವಸೆ ಇಡಲಿಲ್ಲ. ತನ್ನ ದೇವರ ಸನ್ನಿಧಿಗೆ ಬರಲಿಲ್ಲ.
3ಅದರ ಪ್ರಮುಖರು ಗರ್ಜಿಸುವ ಸಿಂಹಗಳು. ಅದರ ನ್ಯಾಯಾಧಿಪತಿಗಳು ಹಸಿದ ತೋಳಗಳು. ಕಡಿಯುವುದಕ್ಕೆ ಎಲುಬನ್ನು ಕೂಡ ಮರುದಿನದವರೆಗೆ ಉಳಿಸವು.
4ಅದರ ಪ್ರವಾದಿಗಳು ಬಡಾಯಿ ಕೊಚ್ಚುವವರು, ವಿಶ್ವಾಸದ್ರೋಹಿಗಳು. ಅದರ ಯಾಜಕರು ಪವಿತ್ರವಾದುದನ್ನು ಹೊಲೆಗೆಡಿಸುವಂಥವರು, ಧರ್ಮವಿಧಿಗಳನ್ನು ಭಂಗಪಡಿಸುವಂಥವರು.
5ಆದರೆ ಅದರ ಮಧ್ಯೆಯಿರುವ ಸರ್ವೇಶ್ವರ ನ್ಯಾಯಸ್ವರೂಪಿ, ಎಂದಿಗೂ ಅನ್ಯಾಯ ಮಾಡುವುದಿಲ್ಲ. ದಿನದಿನವೂ ತಪ್ಪದೆ ನ್ಯಾಯ ದೊರಕಿಸುತ್ತಾರೆ. ಅವರಿಗೆ ಗುಟ್ಟಾಗಿರುವುದು ಯಾವುದೂ ಇಲ್ಲ. ಅನ್ಯಾಯಮಾಡುವವನಿಗಾದರೋ ನಾಚಿಕೆ ಎಂಬುದೇ ಇಲ್ಲ.

6 ಸರ್ವೇಶ್ವರ ಇಂತೆನ್ನುತ್ತಾರೆ: “ ‘ನಾನು ರಾಷ್ಟ್ರಗಳನ್ನು ಧ್ವಂಸಮಾಡಿದ್ದೇನೆ. ಅವುಗಳ ಕೋಟೆಕೊತ್ತಲಗಳು ಪಾಳುಬಿದ್ದಿವೆ. ಅವುಗಳ ಹಾದಿಬೀದಿಗಳನ್ನು ನಿರ್ಜನವಾಗಿಸಿದ್ದೇನೆ. ಯಾರೂ ಅವುಗಳಲ್ಲಿ ಹಾದುಹೋಗುವಂತಿಲ್ಲ. ಅವರ ಪಟ್ಟಣಗಳು ನಾಶವಾಗಿವೆ; ನಿರ್ನಿವಾಸವಾಗಿ ಶೂನ್ಯವಾಗಿವೆ.
7ಇದರಿಂದಲಾದರೂ ಜೆರುಸಲೇಮ್ ನಗರ ನನಗೆ ಭಯಪಡುವುದು, ನಾನು ಕಲಿಸಿದ ಪಾಠವನ್ನು ಎಂದಿಗೂ ಮರೆಯದು’ ಎಂದುಕೊಂಡೆ. ಆದರೆ ಅದರ ನಿವಾಸಿಗಳು ತಮ್ಮ ನಡತೆಯನ್ನು ಕೆಡಿಸಿಕೊಳ್ಳಲು ಮತ್ತಷ್ಟು ಕಾತರರಾದರು.”

8 ಆದುದರಿಂದ ಸರ್ವೇಶ್ವರ ಇಂತೆನ್ನುತ್ತಾರೆ: “ಸ್ವಲ್ಪತಾಳಿರಿ, ನಾನು ತಪ್ಪನ್ನು ನಿಮಗೆ ತೋರಿಸುವ ದಿನಕ್ಕಾಗಿ ಕಾದಿರಿ. ರಾಷ್ಟ್ರಗಳನ್ನು ಒಂದಾಗಿಸಲು, ರಾಜ್ಯಗಳನ್ನು ಒಂದುಗೂಡಿಸಲು ನಿರ್ಧರಿಸಿದ್ದೇನೆ; ಹೀಗೆ ಅವುಗಳ ಮೇಲೆ ನನ್ನ ರೌದ್ರವನ್ನು, ಹೌದು, ನನ್ನ ಉಗ್ರಕೋಪವನ್ನು ಸುರಿಸಲು ತೀರ್ಮಾನಿಸಿದ್ದೇನೆ. ಲೋಕವೆಲ್ಲವು ನನ್ನ ಕೋಪಾಗ್ನಿಯಿಂದ ಧ್ವಂಸವಾಗುವುದು.

9 “ಆಗ ಎಲ್ಲರೂ ಒಮ್ಮನಸ್ಸಿನಿಂದ ನನ್ನನ್ನು ಪೂಜಿಸಿ ನನ್ನ ಹೆಸರೆತ್ತಿ ಪ್ರಾರ್ಥಿಸುವಂತೆ ಜನಾಂಗಗಳ ಬಾಯನ್ನು ಪರಿವರ್ತಿಸಿ ಶುದ್ಧೀಕರಿಸುವೆನು.
10ಚದರಿಹೋಗಿರುವ ನನ್ನ ಜನರು, ನನ್ನ ಭಕ್ತಾದಿಗಳು, ಸುಡಾನಿನ ನದಿಗಳ ಆಚೆಯಿಂದಲೂ ನನಗೆ ಕಾಣಿಕೆಯನ್ನು ತಂದೊಪ್ಪಿಸುವರು.
11ನೀನು ನನಗೆ ಎದುರಾಗಿ ದಂಗೆಯೆದ್ದು ಮಾಡಿದ ನಾನಾ ದುಷ್ಕೃತ್ಯಗಳಿಗಾಗಿ ಆ ದಿನದಂದು ನೀನು ನಾಚಿಕೆಪಡುವ ಅವಶ್ಯಕತೆ ಇರುವುದಿಲ್ಲ. ಏಕೆಂದರೆ ಅತಿ ಗರ್ವದಿಂದ ಮೆರೆಯುವವರನ್ನು ನಿನ್ನ ಮಧ್ಯೆಯಿಂದ ತೊಲಗಿಸಿಬಿಡುವೆನು. ಅಂದಿನಿಂದ ನನ್ನ ಪವಿತ್ರ ಪರ್ವತದ ಮೇಲೆ ನೀನು ಗರ್ವಪಡದೆ ಬಾಳುವೆ.
12ದೀನರೂ ನಮ್ರರೂ ಆದ ಜನರನ್ನು ನಿನ್ನಲ್ಲಿ ಉಳಿಸುವೆನು. ಅವರು ಪ್ರಭುವಿನ ನಾಮದಲ್ಲಿ ಭಯಭಕ್ತಿಯಿಂದಿರುವರು.
13ಇಸ್ರಯೇಲಿನಲ್ಲಿ ಅಳಿದುಳಿದವರು ಅನ್ಯಾಯ ಮಾಡರು, ಸುಳ್ಳಾಡರು. ಅವರ ಬಾಯಲ್ಲಿ ಮೋಸವಿರದು. ಕುರಿಮಂದೆಯಂತೆ ಮೇದು ಸುರಕ್ಷಿತವಾಗಿರುವರು. ಅವರನ್ನು ಯಾರೂ ಹೆದರಿಸರು.”

### ಆನಂದ ಗೀತೆ

14 ಹರ್ಷಧ್ವನಿಗೈ, ಸಿಯೋನ್ ಕುವರಿಯೇ
ಘೋಷಿಸು, ಇಸ್ರಯೇಲ್ ದೇಶವೇ,
ಹೃತ್ಪೂರ್ವಕವಾಗಿ ಸಂತೋಷಿಸು,
ಜೆರುಸಲೇಮ್ ನಗರವೇ.
15 ತಪ್ಪಿಸಿಹನು ಸರ್ವೇಶ ನಿನಗೆ ವಿಧಿಸಿರುವ
ದಂಡನೆಗಳನು
ತಳ್ಳಿ ಹೊರಗಟ್ಟಿಹನು ನಿನ್ನ ಶತ್ರುಗಳನು
ಇಸ್ರಯೇಲಿನ ರಾಜನಾದ ಸರ್ವೇಶ ಇಹನು
ನಿನ್ನ ಮಧ್ಯೆ
ನೀನಿರುವೆ ಇನ್ನೆಂದಿಗೂ ಕೇಡಿಗಂಜದೆ.
16 ಜೆರುಸಲೇಮಿಗೆ ಈ ಪರಿ ಹೇಳುವರು ಆ
ದಿನದೊಳು:
“ಅಂಜಬೇಡ ಸಿಯೋನ್, ಸೋತು
ಜೋಲುಬೀಳದಿರಲಿ ನಿನ್ನ ಕೈಗಳು.”
17 ಪ್ರಸನ್ನವಾಗಿಹನು ದೇವ, ಸರ್ವೇಶ ನಿನ್ನ ಮಧ್ಯೆ
ಕೊಡುವನಾ ಶೂರ ನಿನಗೆ ರಕ್ಷಣೆ
ಹರ್ಷಾನಂದಗೊಳ್ಳುವನು ನಿನ್ನ ವಿಷಯದಲಿ
ಪುನಶ್ಚೇತನಗೊಳಿಸುವನು ನಿನ್ನನು ಪ್ರಶಾಂತ
ಪ್ರೀತಿಯಲಿ

ಗಾನಗೀತೆಗಳಿಂದ ತೋಷಿಸುವನು ನಿನ್ನಲಿ
ಹಬ್ಬಹುಣ್ಣಿಮೆಗಳ ತರದಲಿ.
18 ತಡೆದುಬಿಡುವನು ಸರ್ವವಿನಾಶವನು
ದೂರಮಾಡುವನು ನಿನ್ನಿಂದ ನಿಂದೆ
ಅಪಮಾನವನು.
19 ಆ ದಿನದಲಿ ಇಂತೆನ್ನುವನು:
"ದಂಡಿಸುವೆನು ನಿನ್ನನು ಬಾಧಿಸಿದವರನು
ಉದ್ಧರಿಸುವೆನು ನಿನ್ನಲ್ಲಿ ಕುಂಟುವವರನು
ಒಂದುಗೂಡಿಸುವೆನು ಚದರಿಹೋದವರನು
ಬರಮಾಡುವೆನು ಅವಮಾನಿತರಿಗೆ
ಸನ್ಮಾನವನು
ಗಿಟ್ಟಿಸುವೆನು ನಿಮಗೆ ಜಗದಲ್ಲೆಲ್ಲ
ಕೀರ್ತಿಯನು.
20 ಕರೆದು ತರುವೆನು ನಿಮ್ಮನ್ನು ಆ ಕಾಲದೊಳು
ಮರಳಿಸುವೆನು ಮನೆಗೆ ಆ ದಿನದೊಳು.
ಹಿಂದಿನ ಸಮೃದ್ಧಿಯನ್ನು ಬರಮಾಡುವೆನು ನಿನ್ನ
ಕಣ್ಮುಂದೆ
ದೊರಕುವುದಾಗ ನಿನಗೆ ಸ್ತುತಿಕೀರ್ತಿ
ಜನಾಂಗಗಳ ಮುಂದೆ."
– ಸರ್ವೇಶ್ವರಸ್ವಾಮಿಯ ನುಡಿಯಿದು.